# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 286 (2115)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

ವಿಷಯ : ಕೆಂಪೇಗೌಡರ ಸಮಾಧಿ ಸ್ಥಳವಾದ ಕೆಂಪಾಪುರವನ್ನು ಪ್ರವಾಸಿತಾಣವಾಗಿಸುವ ಬಗ್ಗೆ

(ಅ) ಹಿರಿಯ ಕೆಂಪೇಗೌಡರ ಸಮಾಧಿ ಸ್ಥಳವಾದ ಕೆಂಪಾಪುರವನ್ನು ಪ್ರವಾಸಿ ಸ್ಥಳವಾಗಿ ಅಭಿವೃದ್ಧಿಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಈ ಬಗ್ಗೆ ರೂಪುರೇಷೆಗಳನ್ನು ಸಿದ್ದಪಡಿಸಲಾಗಿದೆಯೇ;

(ಆ) ಮಾಗಡಿ ಪಟ್ಟಣದಲ್ಲಿರುವ ಕೆಂಪೇಗೌಡರ ಕಾಲದ ಕೋಟೆಯನ್ನು ಅಭಿವೃದ್ಧಿಪಡಿಸಲಾಗಿದೆಯೇ; ಇದುವರೆಗೆ ಮುಕ್ತಾಯವಾಗಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; ಇನ್ನೂ ಆಗಬೇಕಾಗಿರುವ ಕಾಮಗಾರಿಗಳು ಯಾವುವು;

(ಇ) ಸಾವನದುರ್ಗ ಪ್ರವಾಸಿ ಕೇಂದ್ರದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳು ಯಾವುವು; ಸಾವನದುರ್ಗಕ್ಕೆ ಬೆಂಗಳೂರಿನಿಂದ ಪ್ರವಾಸಿಗಳ ಅನುಕೂಲಕ್ಕಾಗಿ ನಿಯಮಿತ ಅವಧಿಯಲ್ಲಿ ಕೆಂಪು ಭೋರ್ಡಿನ ಗ್ರಾಮಾಂತರ ನಗರ ಸಾರಿಗೆ ಬಸ್‌ಗಳನ್ನು ಓಡಿಸಲು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯೊಡನೆ ಸಂಪರ್ಕಿಸಿ ಸೂಕ್ತ ಕ್ರಮ ಜರುಗಿಸಲಾಗುವುದೇ?